**ನಿಯಮ 330 ರಡಿ ವಿಧಾನ ಪರಿಷತ್ತಿನ ಮಾನ್ಯ ಸದಸ್ಯರಾದ ಶ್ರೀ ಕೆ. ಪ್ರತಾಪ ಸಿಂಹ ನಾಯಕ್, ಅವರು ಅಡಿಕೆ ಮತ್ತು ಕರಿಮೆಣಸು ಬೆಳೆಗಳಿಗೆ ತಕ್ಷಣವೇ ಬೆಳೆ ಸಮೀಕ್ಷೆ ಪ್ರಾರಂಭಗೊಳಿಸಿ ರೈತರ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯ ಲಾಭ ಪಡೆಯಲು ಅವಕಾಶ ಕಲ್ಪಿಸುವ ಕುರಿತು ಉತ್ತರ:**

**ಪ್ರಶ್ನೆ:** ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಅಡಿಕೆ ಮತ್ತು ಕರಿಮೆಣಸು ಬೆಳೆಗಳಿಗೆ 2024-25 ನೇ ಸಾಲಿಗೆ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ ಪ್ರೀಮಿಯಂ ಮೊತ್ತ ಪಾವತಿಸಿ ನೋಂದಾವಣಿ ಮಾಡಲು ಜುಲೈ ತಿಂಗಳ ಅಂತ್ಯದವರೆಗೆ ಅವಕಾಶ ಕಲ್ಪಿಸಲಾಗಿದೆ. ಆದರೆ ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ 2023-24 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಮಾಡದ ರೈತರ ಜಮೀನಿನ ವಿವರ ತೋರಿಸದೇ ಇರುವುದರಿಂದ ಕಳೆದ ಬಾರಿ ಬೆಳೆ ಸಮೀಕ್ಷೆ ಮಾಡದ ಹಲವಾರು ಮಂದಿ ಅಡಿಕೆ, ಕರಿಮೆಣಸು ಬೆಳೆಯುವ ರೈತರು ಈ ಯೋಜನೆಯಿಂದ ವಂಚಿತರಾಗಿದ್ದಾರೆ. ಎಷ್ಟೋ ಮಂದಿ ರೈತರ ಮನೆಯಲ್ಲಿ ಸ್ಮಾರ್ಟ್ ಫೋನ್ ಇರುವುದಿಲ್ಲ. ಕೆಲವೊಂದು ಕಡೆಗಳಲ್ಲಿ ನೆಟ್ ವರ್ಕ್ ಸಮಸ್ಯೆ ಇದೆ, ಇನ್ನೂ ಕೆಲವು ರೈತರಿಗೆ ಸ್ಮಾರ್ಟ್ ಫೋನ್ ಇದ್ದರೂ ಬೆಳೆ ಸಮೀಕ್ಷೆ ಮಾಡಲು ತಿಳಿಯದ ಕಾರಣದಿಂದಾಗಿ ಹಲವಾರು ರೈತರು ಬೆಳೆ ಸಮೀಕ್ಷೆ ಮಾಡಲು ಸಾಧ್ಯವಾಗಿರುವುದಿಲ್ಲ.

ಈ ಹಿನ್ನಲೆಯಲ್ಲಿ 2024-25 ನೇ ಸಾಲಿನ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯ ಪ್ರಯೋಜನವನ್ನು ಎಲ್ಲಾ ಅಡಿಕೆ ಬೆಳೆಯುವ ರೈತರು ಪಡೆಯುವಂತಾಗಲೂ ಬೆಳೆ ಸಮೀಕ್ಷೆ ಮಾಡದಿರುವ ರೈತರ ಜಮೀನಿಗೆ ಸಹ ಅವಕಾಶ ಕಲ್ಪಿಸಿ, ಇಲಾಖಾ ವತಿಯಿಂದಲೇ ಈ ವರ್ಷ ತಕ್ಷಣವೇ ಬೆಳೆ ಸಮೀಕ್ಷೆ ಪ್ರಾರಂಭ ಮಾಡಿಸಿ, ರೈತರಿಗೆ ಯೋಜನೆಯ ಲಾಭ ಪಡೆಯಲು ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ, ರೈತರು ಅತ್ಯಂತ ಸಂಕಷ್ಟಕ್ಕೆ ಸಿಲುಕಿರುವ ಗಂಭೀರ ಪರಿಸ್ಥಿತಿ ಕುರಿತು ಸದನದಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

**ಉತ್ತರ:**

ನೋಂದಣಿ ಸಮಯದಲ್ಲಿ ಬೆಳೆ ಸಮೀಕ್ಷೆ ಪ್ರಕಾರ ರೈತರ ಮಾಹಿತಿಯನ್ನು ಪರಿಶೀಲಿಸಲಾಗುತ್ತಿದ್ದು, ಇದಕ್ಕಾಗಿ ಪ್ರಸ್ತುತ ವರ್ಷದಲ್ಲಿ ಬಹು ವಾರ್ಷಿಕ ಬೆಳೆಗಳನ್ನು ನೋಂದಣಿ ಮಾಡುವಾಗ ಮುಂಗಾರು 2022 ಮತ್ತು ಮುಂಗಾರು 2023ರ ಬೆಳೆ ಸಮೀಕ್ಷೆ ದತ್ತಾಂಶವನ್ನು ಪರಿಗಣಿಸಲಾಗುತ್ತದೆ. ಈ ಎರಡೂ ವರ್ಷಗಳಲ್ಲಿ ಯಾವುದಾದರೂ ಒಂದು ವರ್ಷದಲ್ಲಿ ಬೆಳೆ ಬೆಳೆದಿದ್ದರೂ ಸಹ ಬೆಳೆ ವಿಮೆ ಮಾಡಿಸಬಹುದಾಗಿರುತ್ತದೆ.

ಬೆಳೆದ ಬೆಳೆಯ ಪ್ರಾಮಾಣಿಕತೆ /ನಿಖರತೆ ಬಗ್ಗೆ ದೃಢಪಡಿಸಿಕೊಳ್ಳುವ ಉದ್ದೇಶದಿಂದ ರೈತರಿಗೆ ರೈತರ ಆಪ್ ಮೂಲಕ ಬೆಳೆ ಸಮೀಕ್ಷೆ ಮಾಡಿ ತಮ್ಮ ಜಮೀನಿನ ವಿವರಗಳನ್ನು ದಾಖಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಒಂದು ವೇಳೆ ನಾನಾ ಕಾರಣಗಳಿಂದ (ನೆಟ್ ವರ್ಕ್ ಸಮಸ್ಯೆ, ಆಂಡ್ರಾಯಿಡ್ ಫೋನ್ ಬಳಕೆ ಬಗ್ಗೆ ಮಾಹಿತಿ ಇಲ್ಲದಿರುವುದು) ರೈತರು ತಮ್ಮ ಜಮೀನಿನ ವಿವರಗಳನ್ನು ದಾಖಲಿಸಲು ಸಾಧ್ಯವಾಗದಿದ್ದಲ್ಲಿ ಸರ್ಕಾರವು ಖಾಸಗಿ ನಿವಾಸಿಗಳ (Private Residents) ಮುಖೇನ ಬೆಳೆ ಸಮೀಕ್ಷೆ ನಡೆಸಿ ರೈತರ ತಾಕುಗಳ ವಿವರಗಳನ್ನು ದಾಖಲಿಸಲು ಅವಕಾಶ ಕಲ್ಪಿಸಿರುತ್ತದೆ. ಬೆಳೆ ಸಮೀಕ್ಷೆ ದಾಖಲಾದ ವಿವರಗಳನ್ನು ನೋಡಲು ಬೆಳೆ ದರ್ಶಕ್ ಆಪ್ ನಲ್ಲಿ ಅವಕಾಶ ಕಲ್ಪಿಸಲಾಗಿದ್ದು ರೈತ ಸಂಪರ್ಕ ಕೇಂದ್ರಗಳಲ್ಲಿ ಖುದ್ದಾಗಿ ನೋಡಬಹುದು.

...2...

2022-23ನೇ ಸಾಲಿನಲ್ಲಿ ಉಡುಪಿ ಜಿಲ್ಲೆಯಲ್ಲಿ ಶೇ. 99ಕ್ಕಿಂತ ಹೆಚ್ಚು ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ.98ಕ್ಕಿಂತ ಹೆಚ್ಚು ಹಾಗೂ 2023-24ನೇ ಸಾಲಿನಲ್ಲಿ ಉಡುಪಿ ಜಿಲ್ಲೆಯಲ್ಲಿ ಶೇ. 99 ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ.95 ರಷ್ಟು ಬೆಳೆ ಸಮೀಕ್ಷೆ ನಡೆಸಿದ್ದು, ಅದರಂತೆ ರೈತರು ಬೆಳೆ ಬೆಳೆದಿರುವ ವಿವರಗಳನ್ನೊಳಗೊಂಡ ದತ್ತಾಂಶ ಲಭ್ಯವಿದ್ದು ಇದರ ಆಧಾರದ ಮೇರೆಗೆ ನೋಂದಣಿ ಮಾಡಲಾಗುತ್ತಿರುವುದರಿಂದ 2024-25ನೇ ಸಾಲಿನಲ್ಲಿ ಸಮೀಕ್ಷೆ ನಡೆಸಿ ನೋಂದಣಿಗೆ ಅವಕಾಶ ಮಾಡುವ ಅವಶ್ಯಕತೆ ಕಂಡು ಬಂದಿರುವುದಿಲ್ಲ. 2023-24ನೇ ಸಾಲಿನಲ್ಲಿ ದಕ್ಷಿಣ ಕನ್ನಡ (228621) ಮತ್ತು ಉಡುಪಿ ಜಿಲ್ಲೆಗಳಲ್ಲಿ (10377) ಅಧಿಸೂಚಿತ ಬೆಳೆಗಳಾದ ಅಡಿಕೆ ಮತ್ತು ಕರಿಮೆಣಸು ಬೆಳೆಗಳಿಗೆ ಒಟ್ಟು 238998 ಸಂಖ್ಯೆಯಷ್ಟು ರೈತ ಪ್ರಕರಣಗಳು ನೊಂದಾಯಿಸಿಲಾಗಿರುತ್ತದೆ. ಅದೇ ರೀತಿ 2024-25ನೇ ಸಾಲಿನಲ್ಲಿ ಈವರೆಗೆ ದಕ್ಷಿಣ ಕನ್ನಡ (205038) ಮತ್ತು ಉಡುಪಿ ಜಿಲ್ಲೆಗಳಲ್ಲಿ (19258) ಅಧಿಸೂಚಿತ ಬೆಳೆಗಳಾದ ಅಡಿಕೆ ಮತ್ತು ಕರಿಮೆಣಸು ಬೆಳೆಗಳಿಗೆ ಒಟ್ಟು 224296 ಸಂಖ್ಯೆಯಷ್ಟು ರೈತ ಪ್ರಕರಣಗಳು ನೊಂದಾಯಿಸಲಾಗಿರುತ್ತದೆ. ಇನ್ನೂ ಹೆಚ್ಚಿನ ಸಂಖ್ಯೆಯಲ್ಲಿ ನೋಂದಾಯಿಸಿಕೊಳ್ಳುವ ನಿರೀಕ್ಷೆಯಲ್ಲಿದ್ದು, ಬ್ಯಾಂಕ್‌ಗಳಿಗೆ ನೊಂದಣಿಯ ಅಂತಿಮ ದಿನಾಂಕದಿಂದ 15 ದಿವಸ ಸಂರಕ್ಷಣೆ ತಂತ್ರಾಂಶದಲ್ಲಿ ವಿವರ ದಾಖಲಿಸಲು ಲಭ್ಯವಿದ್ದು ಈ ಕಾರ್ಯ ಪ್ರಗತಿಯಲ್ಲಿರುತ್ತದೆ.

HORTI 364 HGM 2024

**(ಎಸ್.ಎಸ್. ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು